# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ: | 503 |
| ಮಾನ್ಯ ಸದಸ್ಯರ ಹೆಸರು | ಶ್ರೀ ಎಸ್.ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ಸಚಿವರು | ಉನ್ನತ ಶಿಕ್ಷಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | 20-02-2023 |

| ಪ್ರಶ್ನೆ | ಉತ್ತರ |
|---|---|
| (ಅ) ರಾಜ್ಯದಲ್ಲಿ ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ಸರ್ಕಾರಿ ವಿಶ್ವವಿದ್ಯಾಲಯಗಳು ಎಷ್ಟು? ಅವು ಯಾವುವು; ವಿಶ್ವವಿದ್ಯಾಲಯಗಳಿಗೆ ಕುಲಪತಿಗಳನ್ನು ನೇಮಿಸಲು ಸರ್ಕಾರ ಅನುಸರಿಸುತ್ತಿರುವ ನಿಯಮ ಮತ್ತು ಮಾನದಂಡಗಳೇನು? (ಸಂಪೂರ್ಣ ಮಾಹಿತಿ ನೀಡುವುದು) | ರಾಜ್ಯದಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ವಿಶ್ವವಿದ್ಯಾಲಯಗಳ ಸಂಖ್ಯೆ: 24 |

| ಕ್ರ ಸಂ | ವಿಶ್ವವಿದ್ಯಾಲಯದ ಹೆಸರು |
|---|---|
| 1 | ಬೆಂಗಳೂರು ವಿಶ್ವವಿದ್ಯಾಲಯ |
| 2 | ಮೈಸೂರು ವಿಶ್ವವಿದ್ಯಾಲಯ |
| 3 | ಕರ್ನಾಟಕ ವಿಶ್ವವಿದ್ಯಾಲಯ |
| 4 | ಕುವೆಂಪು ವಿಶ್ವವಿದ್ಯಾಲಯ |
| 5 | ಗುಲ್ಬರ್ಗ ವಿಶ್ವವಿದ್ಯಾಲಯ |
| 6 | ಮಂಗಳೂರು ವಿಶ್ವವಿದ್ಯಾಲಯ |
| 7 | ತುಮಕೂರು ವಿಶ್ವವಿದ್ಯಾಲಯ |
| 8 | ಕನ್ನಡ ವಿಶ್ವವಿದ್ಯಾಲಯ |
| 9 | ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ |
| 10 | ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ |
| 11 | ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ |
| 12 | ದಾವಣಗೆರೆ ವಿಶ್ವವಿದ್ಯಾಲಯ |
| 13 | ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯ, |
| 14 | ರಾಣಿ ಚನ್ನಮ್ಮ ವಿಶ್ವವಿದ್ಯಾಲಯ |
| 15 | ಕರ್ನಾಟಕ ರಾಜ್ಯ ಸಂಸ್ಕೃತ ವಿಶ್ವವಿದ್ಯಾಲಯ |
| 16 | ಕರ್ನಾಟಕ ರಾಜ್ಯ ಡಾ: ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ, |
| 17 | ಕರ್ನಾಟಕ ರಾಜ್ಯ ಜಾನಪದ ವಿಶ್ವವಿದ್ಯಾಲಯ, |
| 18 | ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯ, |
| 19 | ಬೆಂಗಳೂರು ಉತ್ತರ ವಿಶ್ವವಿದ್ಯಾಲಯ |
| 20 | ರಾಯಚೂರು ವಿಶ್ವವಿದ್ಯಾಲಯ |
| 21 | ಮಂಡ್ಯ ವಿಶ್ವವಿದ್ಯಾಲಯ, |
| 22 | ನೃಪತುಂಗ ವಿಶ್ವವಿದ್ಯಾಲಯ |
| 23 | ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯ |
| 24 | ಡಾ. ಬಿ.ಆರ್. ಅಂಬೇಡ್ಕರ್ ಸ್ಕೂಲ್ ಆಫ್ ಎಕನಾಮಿಕ್ಸ್ ಯೂನಿವರ್ಸಿಟಿ |

2018ರ ಯುಜಿಸಿ ಮಾರ್ಗಸೂಚಿ ನಿಯಮ 7.3 ಮತ್ತು ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000ರ ಪ್ರಕರಣ 14 ರನ್ವಯ ವಿಶ್ವವಿದ್ಯಾಲಯದ ಕುಲಪತಿ ಸ್ಥಾನಕ್ಕೆ ಸೂಕ್ತ ವ್ಯಕ್ತಿಯನ್ನು ನೇಮಿಸುವ ಸಲುವಾಗಿ ಈ ಕೆಳಕಂಡ ಮಾನದಂಡಗಳನ್ನು ಅನುಸರಿಸಲಾಗುತ್ತಿದೆ:

(1) ಯಜಿಸಿಯಿಂದ ನಾಮ ನಿರ್ದೇಶನಗೊಂಡ ಪ್ರತಿನಿಧಿ (2) ವಿಶ್ವವಿದ್ಯಾಲಯದ ಸಿಂಡಿಕೇಟ್‌ನಿಂದ ನಾಮ ನಿರ್ದೇಶನಗೊಂಡ ಪ್ರತಿನಿಧಿ (3) ಸರ್ಕಾರದ ನಾಮ

| | | |
|---|---|---|
| | | ನಿರ್ದೇಶನಗೊಂಡ ಪ್ರತಿನಿಧಿ ಮತ್ತು (4) ಕುಲಾಧಿಪತಿಗಳಿಂದ ನಾಮನಿರ್ದೇಶನಗೊಂಡ ಪ್ರತಿನಿಧಿಯನ್ನೊಳಗೊಂಡ ಶೋಧನಾ ಸಮಿತಿಯನ್ನು ರಚಿಸಬೇಕಾಗಿರುತ್ತದೆ<br><br>(2) ಉನ್ನತ ಶಿಕ್ಷಣ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ ಅಥವಾ ನಾಮ ನಿರ್ದೇಶನಗೊಂಡ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಿಲ್ಲದ ಅಧಿಕಾರಿಯು ಈ ಶೋಧನಾ ಸಮಿತಿಯ ಸದಸ್ಯ ಕಾರ್ಯದರ್ಶಿಯಾಗಿರುತ್ತಾರೆ.<br><br>(3) ಕುಲಪತಿ ಹುದ್ದೆಗೆ ಅರ್ಜಿ ಸಲ್ಲಿಸಲು ವಿಶ್ವವಿದ್ಯಾಲಯಗಳಲ್ಲಿ ಪ್ರಾಧ್ಯಾಪಕರಾಗಿ ಕನಿಷ್ಠ 10 ವರ್ಷಗಳ ಸೇವೆ ಸಲ್ಲಿಸಿದ ಅಥವಾ ವಿಖ್ಯಾತ ಸಂಶೋಧನಾ ಅಥವಾ ಶೈಕ್ಷಣಿಕ ಆಡಳಿತ ಸಂಸ್ಥೆಗಳಲ್ಲಿ ಕನಿಷ್ಠ 10 ವರ್ಷಗಳು ಕಾರ್ಯನಿರ್ವಹಿಸಿದ ಅನುಭವ, ಉನ್ನತ ಮಟ್ಟದ ಸಾಮರ್ಥ್ಯ ಸಮಗ್ರತೆಯ ಶೈಕ್ಷಣಿಕ ನಾಯಕತ್ವವನ್ನು ಪ್ರದರ್ಶಿಸಿದ ಪುರಾವೆಯೊಂದಿಗೆ, ನೈತಿಕ ಮೌಲ್ಯಗಳನ್ನು ಹಾಗೂ ಸಾಂಸ್ಥಿಕ ಬದ್ಧತೆಯನ್ನು ಹೊಂದಿರತಕ್ಕದ್ದು.<br><br>ಮುಂದುವರೆದು, ಸರ್ಕಾರದ ಸುತ್ತೋಲೆ ಸಂಖ್ಯೆ:ಇಡಿ 57 ಯುಎಂವಿ 2022, ದಿನಾಂಕ: 30.11.2022ರಲ್ಲಿ ಕುಲಪತಿಗಳ ಆಯ್ಕೆ ಸಂಬಂಧ ರಚಿಸಲಾಗುವ ಶೋಧನಾ ಸಮಿತಿಯ ನಿರ್ವಹಣೆಯಲ್ಲಿ ಪಾರದರ್ಶಕತೆ ತರಲು ಪ್ರಮಾಣಿತ ಕಾರ್ಯಾಚರಣೆಯ ವಿಧಾನ (Standard Operating Procedure) ಗಳನ್ನು ಶೋಧನಾ ಸಮಿತಿಯ ಸಂಚಾಲಕರಾದ ಸರ್ಕಾರದ ಉಪ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು) ಹಾಗೂ ಸಚಿವಾಲಯದ ಹಂತದ ಅಧಿಕಾರಿ / ಸಿಬ್ಬಂದಿ ವರ್ಗದವರು ಅನುಸರಿಸುವಂತೆ ಸೂಚಿಸಿಲಾಗಿದೆ. |
| (ಆ) | ರಾಜ್ಯದಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಯಾವ ಯಾವ ಸರ್ಕಾರಿ ವಿಶ್ವವಿದ್ಯಾಲಯಗಳ ಕುಲಪತಿ ಮತ್ತು ಕುಲಸಚಿವರುಗಳ ಅಕ್ರಮಗಳ ಆರೋಪವನ್ನು ಎದುರಿಸುತ್ತಿದ್ದಾರೆ. ಇವರ ವಿರುದ್ಧ ಕೈಗೊಂಡಿರುವ ಕ್ರಮಗಳೇನು (ಮಾಹಿತಿ ನೀಡುವುದು) | ಸರ್ಕಾರಿ ವಿಶ್ವವಿದ್ಯಾಲಯಗಳಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಕುಲಪತಿ ಮತ್ತು ಕುಲಸಚಿವರುಗಳ ವಿರುದ್ಧ ಯಾವುದೇ ಅಕ್ರಮ ಆರೋಪಗಳ ಕುರಿತು ಪ್ರಸ್ತಾವನೆ ಸರ್ಕಾರದಲ್ಲಿ ಸ್ವೀಕೃತವಾಗಿರುವುದಿಲ್ಲ. |
| (ಇ) | ರಾಜ್ಯದ ಹಲವಾರು ಸರ್ಕಾರಿ ವಿಶ್ವವಿದ್ಯಾಲಯಗಳಲ್ಲಿ ವಾಮ ಮಾರ್ಗದ ಮೂಲಕ ಉನ್ನತ ಹುದ್ದೆಗಳಲ್ಲಿರುವುದು, ಉನ್ನತ ಹುದ್ದೆಗಳಲ್ಲಿರುವವರು ಭ್ರಷ್ಟಚಾರ ಮತ್ತು ಅಕ್ರಮಗಳಲ್ಲಿ ಭಾಗಿಯಾಗುತ್ತಿರುವುದರಿಂದ, ಸರ್ಕಾರಿ ವಿಶ್ವವಿದ್ಯಾಲಯಗಳ ಮೇಲೆ ಸಾರ್ವಜನಿಕರಲ್ಲಿ ಋಣಾತ್ಮಕ ಅಭಿಪ್ರಾಯ ಬೆಳೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರಿ ವಿಶ್ವವಿದ್ಯಾಲಯಗಳಲ್ಲಿ ಸ್ವಚ್ಛ ಮತ್ತು ದಕ್ಷ ಆಡಳಿತ ಹಾಗೂ ಗುಣಾತ್ಮಕ ಶೈಕ್ಷಣಿಕ ವ್ಯವಸ್ಥೆ ಜಾರಿಗೆ ತರಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ಮಾಹಿತಿ ನೀಡುವುದು) | ಸರ್ಕಾರದ ಸುತ್ತೋಲೆ ಸಂ: ಇಡಿ 54 ಯುಎಸ್‌ವಿ 2022, ದಿನಾಂಕ: 12-09-2022 ರಲ್ಲಿ ರಾಜ್ಯದ ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಗೊಳಪಡುವ ವಿಶ್ವವಿದ್ಯಾಲಯಗಳು ಸರ್ಕಾದ ಆದೇಶ/ ಸುತ್ತೋಲೆ / ಪ್ರಚಲಿತ ನಿಯಮಗಳು/ ಯುಜಿಸಿಯ ಮಾರ್ಗಸೂಚಿಗಳನ್ನು ಅಳವಡಿಸಿಕೊಳ್ಳದೇ, ನಿಯಮಾನುಸಾರ ಸರ್ಕಾರದ ಅನುಮತಿ ಪಡೆದು ಹುದ್ದೆಗಳನ್ನು ಸೃಜನೆ ಮಾಡದೆ ಹಾಗೂ ಪರಿನಿಯಮಾವಳಿಯನ್ನು ರಚಿಸಿಕೊಳ್ಳದೇ ಹುದ್ದೆಗಳ ಸೃಜನೆ, ಬೋಧಕ / ಬೋಧಕೇತರ ನೌಕರರ ನೇಮಕಾತಿ, ಪದೋನ್ನತಿ, ಹುದ್ದೆಗಳ ಉನ್ನತೀಕರಣ, ವಿಷಯದ ಕುರಿತಂತೆ ರಾಜ್ಯ ಸರ್ಕಾರ ಹಾಗೂ ಕಾಲಕಾಲಕ್ಕೆ ಜಾರಿಗೊಳಿಸಲಾಗುವ ಯುಜಿಸಿಯ ಮಾರ್ಗಸೂಚಿಗಳನ್ನು ಅಳವಡಿಸಿಕೊಳ್ಳದೇ ನೇಮಕಾತಿ / ಮುಂಬಡ್ತಿ / ಹುದ್ದೆಗಳನ್ನು ಉನ್ನತೀಕರಣ ಹಾಗೂ ಹೆಚ್ಚುವರಿ ಬಡ್ತಿಗಳನ್ನು ನೀಡಿ, ಸರ್ಕಾರ ಹಾಗೂ ವಿಶ್ವವಿದ್ಯಾಲಯಕ್ಕೆ |

| | | |
|---|---|---|
| | | ಆರ್ಥಿಕ ನಷ್ಟವನ್ನು ಉಂಟು ಮಾಡಿದ್ದಲ್ಲಿ, ಅಂತಹ ಕ್ರಮಗಳು ನಿಯಮಬಾಹಿರವಾಗಿದ್ದು ಇಂತಹ ನಿರ್ಣಯಗಳನ್ನು ತೆಗೆದುಕೊಂಡವರ ವಿರುದ್ಧ ಹಾಗೂ ಜಾರಿ ಮಾಡಿದವರರ ವಿರುದ್ಧ ಶಿಸ್ತು ಕ್ರಮ ಜರುಗಿಸಲಾಗುವುದು. ಅಲ್ಲದೆ ಉಂಟಾಗುವ ಆರ್ಥಿಕ ನಷ್ಟವನ್ನು ಅವರಿಂದಲೇ ವಸೂಲಿ ಮಾಡಲಾಗುವುದು. ಇಂತಹ ನಿಯಮಬಾಹಿರ ನೇಮಕಾತಿಗ / ಬಡ್ತಿಗಳಿಗೆ ಸರ್ಕಾರದಿಂದ ಅಥವಾ ವಿಶ್ವವಿದ್ಯಾಲಯದ ಯಾವುದೇ ಸಹಾಯಾನುದಾನವನ್ನು ಒದಗಿಸಲಾಗುವುದಿಲ್ಲ ಅಥವಾ ಬಳಸುವಂತಿಲ್ಲ.<br><br>ಈ ಸೂಚನೆಗಳ ಉಲ್ಲಂಘನೆ / ಲೋಪಗಳಿಗೆ ಹಾಗೂ ಅದರ ಪರಿಣಾಮಗಳಿಗೆ ವಿಶ್ವವಿದ್ಯಾಲಯದ ಕುಲಪತಿ, ಕುಲಸಚಿವರು ಮತ್ತು ಹಣಕಾಸು ಅಧಿಕಾರಿ ಹಾಗೂ ಸಂಬಂಧಿಸಿದ ಅಧಿಕಾರಿ / ನೌಕರರನ್ನು ನೇರ ಹೊಣೆಗಾರರನ್ನಾಗಿ ಮಾಡಲಾಗುವುದು. ಅಲ್ಲದೇ ಯಾವುದೇ ಮುನ್ಸೂಚನೆ ನೀಡದೆ ಸಂಬಂಧಪಟ್ಟ ನೇಮಕಾತಿ ಪ್ರಾಧಿಕಾರಕ್ಕೆ ಶಿಸ್ತು ಕ್ರಮ ಜರುಗಿಸಲು ಶಿಫಾರಸ್ಸು ಮಾಡಲಾಗುವುದು ಎಂದು ಎಲ್ಲಾ ವಿಶ್ವವಿದ್ಯಾಲಯಗಳಿಗೆ ಸೂಚನೆ ನೀಡಲಾಗಿದೆ.<br><br>ಈ ಸುತ್ತೋಲೆಯಲ್ಲಿ ತಿಳಿಸಿರುವ ಆರೋಪಗಳನ್ನು ಹೊರತುಪಡಿಸಿ ಇನ್ನಿತರೆ ಯಾವುದೇ ಭ್ರಷ್ಟಚಾರ ಮತ್ತು ಅಕ್ರಮಗಳು ಕಂಡು ಬಂದಲ್ಲಿ ಈ ಬಗ್ಗೆ ಪರಿಶೀಲಿಸಿ, ಅವಶ್ಯವಿದ್ದಲ್ಲಿ, ನಿಯಮಾನುಸಾರ ತನಿಖಾ ಸಮಿತಿಯನ್ನು ರಚಿಸಿ, ತನಿಖೆ ನಡೆಸಿ, ತನಿಖಾ ವರದಿಯನುಸಾರ ಮುಂದಿನ ಕ್ರಮ ಜರುಗಿಸಲಾಗುವುದು. |

**ಸಂಖ್ಯೆ: ಇಡಿ 32 ಯುಎನ್‌ಇ 2023**

**(ಡಾ: ಅಶ್ವಥ್ ನಾರಾಯಣಸಿ.ಎನ್.)**
ಉನ್ನತಶಿಕ್ಷಣ, ಐಟಿ - ಬಿಟಿ, ವಿಜ್ಞಾನ
ಮತ್ತುತಂತ್ರಜ್ಞಾನ, ವಿದ್ಯುನ್ಮಾನಮತ್ತುಕೌಶಲ್ಯಾಭಿವೃದ್ಧಿ,
ಜೀವನೋಪಾಯಹಾಗೂಉದ್ಯಮಶೀಲತೆಸಚಿವರು.